ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/48/ಶುಲ್ಕ ವಿನಾಯಿತಿ/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:29.05.2017.

# ಸುತ್ತೋಲೆ

**ವಿಷಯ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ/372/ಯುಎನ್ಇ/2012, ದಿ:14.09.2012.
2. ಸರ್ಕಾರಿ ಆದೇಶ ಸಂಖ್ಯೆ:ಸಕಇ/83/ಪಕವಿ/2013, ದಿನಾಂಕ:27.06.2013.
3. ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ವಿಧಾನಸಭೆ, ಬೆಂಗಳೂರು ರವರ ಕಛೇರಿ ಪತ್ರ ಸಂಖ್ಯೆ:ಕವಿಸಸ/ಅಜಾಅಪ/60/ಅರ್ಜಿ/2016-17, ದಿನಾಂಕ:01.03.2017.
4. ಈ ಕಛೇರಿಯ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/48/ಶುಲ್ಕ ವಿನಾಯಿತಿ/2016-17, ದಿನಾಂಕ:25.06.2016.
5. ಜಿಲ್ಲಾಧ್ಯಕ್ಷರು/ಕಾರ್ಯದರ್ಶಿಗಳು, ಬಹುಜನ ವಿದ್ಯಾರ್ಥಿ ಸಂಘ, (ಬಿ.ವಿ.ಎಸ್), ರಾಮನಗರ ಜಿಲ್ಲೆ ಇವರ ದಿನಾಂಕರಹಿತ ಮನವಿ ಪತ್ರ.

* * * * * * *

ಇಲಾಖಾ ವ್ಯಾಪ್ತಿಯ ಪದವಿ ಕಾಲೇಜುಗಳಲ್ಲಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆಯುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅರ್ಹ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದ ಮಿತಿಯೊಳಗೆ ಇದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಂದ ದಾಖಲಾತಿ ಸಂದರ್ಭದಲ್ಲಿ ಕಡ್ಡಾಯವಾಗಿ ಶುಲ್ಕವನ್ನು ಮುಂಗಡವಾಗಿ ಅಥವಾ ಸ್ಥಳದಲ್ಲೇ ಪಾವತಿಸುವಂತೆ ಒತ್ತಾಯಿಸಬಾರದು ಎಂದು ಉಲ್ಲೇಖ(1)ರ ಸರ್ಕಾರದ ಸುತ್ತೋಲೆ ಹಾಗೂ ಉಲ್ಲೇಖ(2)ರ ಸರ್ಕಾರಿ ಆದೇಶದಲ್ಲಿ ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ. ಆದಾಗ್ಯೂ, ಕೆಲವು ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಂದರ್ಭದಲ್ಲಿ ಶುಲ್ಕ ವಸೂಲು ಮಾಡುತ್ತಿರುವುದಾಗಿ ಉಲ್ಲೇಖ(5)ರ ಪತ್ರದಲ್ಲಿ ಮನವಿಯನ್ನು ಸಲ್ಲಿಸಿರುತ್ತಾರೆ. ಆದುದರಿಂದ, ಸರ್ಕಾರದ ಸುತ್ತೋಲೆ ಹಾಗೂ ಆದೇಶಗಳ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಸದರಿ ಸುತ್ತೋಲೆ ಹಾಗೂ ಆದೇಶದಲ್ಲಿ ಜಾರಿಗೊಳಿಸಿರುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆಯೂ ಹಾಗೂ ಸರ್ಕಾರದ ಆದೇಶಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾಲೇಜಿನಲ್ಲಿ ವಿವಿಧ ಕೋರ್ಸುಗಳಿಗೆ ಪ್ರವೇಶ ಪಡೆಯುವ ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪಾವತಿಸಬೇಕಾದ ಕಡ್ಡಾಯ ಶುಲ್ಕಗಳನ್ನು ಸಂಬಂಧಿಸಿದ ತಾಲ್ಲೂಕು / ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಿಂದ ಪಡೆಯುವ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಗಿದೆ.

'ಕರಡು, ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ'

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ, ಅಗತ್ಯ ಕ್ರಮಕ್ಕಾಗಿ:
1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಶಿಇ ಕಛೇರಿ, ಬೆಂಗಳೂರು-ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:
1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ವಿಧಾಸೌಧ, ಅಂಚೆಪೆಟ್ಟಿಗೆ ಸಂಖ್ಯೆ:5074, ಬೆಂಗಳೂರು.
3. ಜಿಲ್ಲಾ ಅಧ್ಯಕ್ಷರು, ಬಹುಜನ ವಿದ್ಯಾರ್ಥಿ ಸಂಘ, ರಾಮನಗರ, ರಾಮನಗರ ಜಿಲ್ಲೆ.
4. ಕಛೇರಿ ಪ್ರತಿ.

E:\BHASKAR\15.02.2011\FEE STRUCTURE\Fees exemption for SC-ST students_circular_.docx